ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE: 19/02/2020

# ಪರಿಷತ್‌ನಲ್ಲಿ ವಿಪಕ್ಷದಿಂದ ಶಾಸಕ ಮೇಲೆ ಟಾರ್ಗೆಟ್!

ವಿಧಾನ ಪರಿಷತ್: ಸಿಎಎ ವಿರೋಧಿಸಿ ಮಂಗಳೂರಿನಲ್ಲಿ ನಡೆದ ಪ್ರತಿಭಟನೆ ವೇಳೆ ಗೋಲಿಬಾರ್‌ಗೆ ಇಬ್ಬರು ಬಲಿಯಾಗಿರುವುದು ಪೊಲೀಸರ ಪೂರ್ವ ನಿಯೋಜಿತ ಕೃತ್ಯ. ಹಾಗೂ ಇದನ್ನು ಹೈಕೋರ್ಟ್ ನ್ಯಾಯಮೂರ್ತಿಗಳು ಅಥವಾ ಸದನ ಸಮಿತಿ ಮೂಲಕ ತನಿಖೆ ನಡೆಸಬೇಕು ಎಂದು ಕಾಂಗ್ರೆಸ್ ಒತ್ತಾಯಿಸಿದೆ.

ಒಂದು ಹಂತದಲ್ಲಿ ಬಿಜೆಪಿ ಸದಸ್ಯ ಎನ್.ರವಿಕುಮಾರ್ ಮಂಗಳೂರಿನಲ್ಲಿ ಸತ್ತವರ ಬಗ್ಗೆ ಟೆರರಿಸ್ಟ್ ಎಂಬ ಪದ್ಬಳಕೆ ಮಾಡಿದಾಗ, ಕಾಂಗ್ರೆಸ್-ಜೆಡಿಎಸ್ ಸದಸ್ಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಕೊನೆಗೆ ರವಿಕುಮಾರ್ ಕ್ಷಮೆ ಯಾಚಿಸಿದ ಘಟನೆಯೂ ನಡೆಯಿತು.

ಕಾಂಗ್ರೆಸ್ ಸದಸ್ಯ ಮಂಗಳೂರು ಗಲಭೆ ಕುರಿತು ಮಾತನಾಡುವ ವೇಳೆ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಸಂಸದರು ಗೋಲಿಬಾರ್‌ನಲ್ಲಿ ಸತ್ತಿರುವ ಯುವಕರ ಮನೆಗೆ ಭೇಟಿ ನೀಡಿಲ್ಲ ಎಂದು ಪ್ರಸ್ತಾಪಿಸುತ್ತಿದ್ದಂತೆ ಸದನದಲ್ಲಿ ಗದ್ದಲದ ವಾತಾವರಣ ಉಂಟಾಯಿತು. ಈ ಮಧ್ಯೆ ಬಿಜೆಪಿ ಸದಸ್ಯ ರವಿಕುಮಾರ್, ಟೆರರಿಸ್ಟ್ ಮನೆಗೆ ಹೋಗುವುದಿಲ್ಲ ಎಂದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿ ಕಾಂಗ್ರೆಸ್, ಜೆಡಿಎಸ್ ಸದಸ್ಯರು ರವಿ ಕುಮಾರ್‌ರಿಂದ ಕ್ಷಮೆಗೆ ಆಗ್ರಹಿಸಿ ಸದನದ ಬಾವಿಗೆ ಇಳಿದರು. ಕ್ಷಮೆ ಕೇಳದೇ ಇರುವುದರಿಂದ ಸಭಾಪತಿ ಪ್ರತಾಪ್‌ಚಂದ್ರಶೆಟ್ಟಿ ಅರ್ಧಗಂಟೆ ಕಲಾಪ ಮುಂದೂಡಿ, ಆಡಳಿತ ಪಕ್ಷ ಮತ್ತು ವಿರೋಧ ಪಕ್ಷದ ಸದಸ್ಯರನ್ನು ತಮ್ಮ ಕಚೇರಿಗೆ ಕರೆಸಿ ಸಂಧಾನ ಮಾಡಿಸಿದರು.

ಅರ್ಧಗಂಟೆ ನಂತರ ಕಲಾಪ ಆರಂಭವಾಗುತ್ತಿದ್ದಂತೆ ರವಿ ಕುಮಾರ್ ಮಾತನಾಡಿ, 'ನನ್ನ ಹೇಳಿಕೆಯಿಂದ ಯಾರಿಗಾದರೂ ನೋವಾಗಿದ್ದ ಕ್ಷಮೆ ಯಾಚಿಸುತ್ತೇನೆ' ಎನ್ನುತ್ತಿದ್ದಂತೆ ಪ್ರತಿಪಕ್ಷದವರು ಪ್ರತಿಭಟನೆ ಹಿಂದಕ್ಕೆ ಪಡೆದರು. ಕಲಾಪ ಮುಂದುವರಿಯಿತು. ಈ ವೇಳೆ ಮಾತಿನ ಚಕಮಕಿ ನಡೆದಿದ್ದು, ಸಭಾಪತಿ ಪ್ರತಾಪ್‌ಚಂದ್ರಶೆಟ್ಟಿ ಮಧ್ಯಪ್ರವೇಶಿಸಿ, ಸರಾಗವಾಗಿ ಕಲಾಪ ಮುಂದುವರಿಯುವಂತೆ ಮಾಡಿದರು.